146 ಸಂಖ್ಯೆ ಪ್ರಶ್ನೆ
ನಿ-72
ಕ್ರ-199
ಕಂಪ್ಯೂಟರ್

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಎಸ್.ರವಿ ಮತ್ತು ಶ್ರೀ ನಸೀರ್ ಅಹಮದ್ ಇವರುಗಳು ನಿಯಮ 72 ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ**

| | |
|---|---|
| **ವಿಷಯ:** | ಕೇಂದ್ರ ಸರ್ಕಾರದ NATIONAL COMMISSION FOR MINORITY EDUCATIONAL INSTITUTIONS ರವರು ರಾಜ್ಯದ ಕೆಲವು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ. ಕಾಲೇಜು)ಗಳಿಗೆ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆ ಸ್ಥಾನಮಾನ ನೀಡಿದೆ. ಇಂತಹ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ ಕಾಲೇಜು)ಗಳಿಗೆ ರಾಜ್ಯದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದಲೂ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆ ಸ್ಥಾನಮಾನದ ಮಾನ್ಯತೆ ದೊರೆಯಬೇಕಿದೆ. ಈ ಸಂಬಂಧ ಕೆಲವು ಕಾಲೇಜುಗಳು ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಿ ಹಲವು ವರ್ಷಗಳಾಗಿದ್ದರೂ ಇಲ್ಲಿಯವರೆಗೆ ಯಾವುದೇ ಪ್ರಗತಿ ಆಗಿರುವುದಿಲ್ಲ. ಇದು ಸಂವಿಧಾನದ ಅನುಚ್ಛೇದ 30ರ ಉಲ್ಲಂಘನೆಯಾಗಿದ್ದು, ಸಾರ್ವಜನಿಕ ಮಹತ್ವದ ವಿಷಯವಾಗಿದೆ. ಸದರಿ ಪ್ರಸ್ತಾವನೆಯನ್ನು ವಿಳಂಬ ಮಾಡದೇ ಇತ್ಯರ್ಥಪಡಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯಬಯಸುತ್ತೇನೆ. |

*******

ಕೇಂದ್ರ ಸರ್ಕಾರದ ಆಡಳಿತ ವ್ಯಾಪ್ತಿಗೊಳಪಡುವ National Commission for Minority Educational Institutions, New Delhi ಇವರು ರಾಜ್ಯದ ಎರಡು ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡಿರುವ ಮಾಹಿತಿ ಲಭ್ಯವಿರುತ್ತದೆ. ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡಲು ಅನುಸರಿಸಬೇಕಾದ ಕ್ರಮ ಹಾಗೂ ಕಾರ್ಯವಿಧಾನಗಳ ಕುರಿತು ಇಲಾಖೆಯು ನಿಯಮಾವಳಿಗಳನ್ನು ರೂಪಿಸುತ್ತಿದೆ. ಕರಡು ನಿಯಮಾವಳಿಗಳಿಗೆ ವಿವಿಧ ಇಲಾಖೆಗಳ ಸಹಮತಿ ಪಡೆದು ಕ್ರಮವಹಿಸಬೇಕಾಗಿರುತ್ತದೆ. ರಚಿಸಲಾಗುತ್ತಿರುವ ನಿಯಮಾವಳಿಗಳು ಅಂತಿಮಗೊಂಡ ನಂತರ ಅರ್ಹ ಸಂಸ್ಥೆಗಳಿಗೆ ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡಲು ನಿಯಮಾನುಸಾರ ಕ್ರಮವಹಿಸಲಾಗುವುದು.

* * * *

**ಕೌಉಜೀಇ 61 ಕೈತಪ್ರ 2022**

(ಡಾ. ಅಶ್ವತ್ಥ ನಾರಾಯಣ.ಸಿ.ಎನ್.)
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು